ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮಕ್ಕೆ ಪ್ರವಾಹದಿಂದ ಆಗುವ ಹಾನಿ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ್ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

312 (246) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮವು ಕೃಷ್ಣಾ ನದಿಗೆ ಅತಿ ಸಮೀಪದಲ್ಲಿದ್ದು, ಪ್ರತಿ ವರ್ಷ ಮಳೆಗಾಲದ ಸಂದರ್ಭದಲ್ಲಿ ಪ್ರವಾಹಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಪ್ರವಾಹದಿಂದ ಆದ ಆಸ್ತಿ-ಪಾಸ್ತಿಗಳ ಹಾನಿಯ ವಿವರ ಒದಗಿಸುವುದು;

(ಇ) ಪ್ರತಿ ವರ್ಷ ಪ್ರವಾಹ ಪರಿಸ್ಥಿತಿ ಎದುರಿಸುತ್ತಿರುವ ಈ ಗ್ರಾಮವನ್ನು ಶಾಶ್ವತವಾಗಿ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಈ) ಇದ್ದಲ್ಲಿ, ಈ ಯೋಜನೆಯ ರೂಪುರೇಷೆಗಳನ್ನು ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)